# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 12-03-2021 ಪ್ರಶ್ನೆ ಸಂಖ್ಯೆ : 932 (1237)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ)

ಉತ್ತರ ನೀಡಬೇಕಾದ ದಿನಾಂಕ : 12-03-2021

ಉತ್ತರಿಸುವ ಸಚಿವರು : ಕೃಷಿ ಸಚಿವರು

ವಿಷಯ : ಕೃಷಿ ಇಲಾಖೆಯಲ್ಲಿ 371 (ಜೆ)ರಂತೆ ಜೇಷ್ಠತಾ ಪಟ್ಟಿ ಪ್ರಕಟಿಸುವ ಬಗ್ಗೆ

(ಅ) ಅನುಚ್ಛೇದ 371(ಜೆ) ತಿದ್ದುಪಡಿಯಾದ ನಂತರ ಕೃಷಿ ಇಲಾಖೆಯಲ್ಲಿ ದಿನಾಂಕ: 01.01.2013ರ ಕರಡು ಪತ್ರಿ ನಿಯಮದ ಪ್ರಕಾರ ಜೇಷ್ಠತಾ ಪಟ್ಟಿಯನ್ನು ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಕಾರಣಕ್ಕಾಗಿ 7 ವರ್ಷಗಳಿಂದ ಮಾಡಿಲ್ಲ ; ಸದರಿ ಜೇಷ್ಠತಾ ಪಟ್ಟಿಯನ್ನು ಮಾಡದೇ ಇರುವುದರಿಂದ ಬೆಂಗಳೂರಿನ ಕೇಂದ್ರ ಕಛೇರಿಯಲ್ಲಿ ಕೆಲಸ ನಿರ್ವಹಿಸುತ್ತಿರುವ 371 (ಜೆ) ಅಡಿಯಲ್ಲಿ ಮುಂಬಡ್ತಿಗೆ ಅರ್ಹರಿರುವ ಕಲ್ಯಾಣ ಕರ್ನಾಟಕ ಭಾಗದ ನೌಕರರು ಮುಂಬಡ್ತಿಯಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಮುಂಬಡ್ತಿ ನೀಡಲಾಗುವುದು ? (ಸಂಪೂರ್ಣ ವಿವರ ನೀಡುವುದು)